**Bangalore**
**Regional News**
**23.06.2026 / 14.30 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ನವದೆಹಲಿಯಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಪದ್ಮ ಪ್ರಶಸ್ತಿ ಪ್ರದಾನ; ರಾಜ್ಯದ ಐವರಿಗೆ ಗೌರವ

೨. ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಂದ ರಾಜಕೀಯ- ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಆರೋಪ

೩. ರಾಜ್ಯದಲ್ಲಿ ಪ್ರವಾಸೋದ್ಯಮ ಉತ್ತೇಜಿಸಲು ಸರ್ಕಾರದಿಂದ 'ನಮ್ಮ ಗೈಡ್ ಆಪ್' ಹಾಗೂ ವೆಬ್‌ಸೈಟ್ ಬಿಡುಗಡೆ

೪. ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡಮತದಾನ ಮಾಡಿದವರನ್ನು ಕ್ಷಮಿಸಲು ಸಾಧ್ಯವಿಲ್ಲ- ಪ್ರತಿಪಕ್ಷ ನಾಯಕ ಆರ್.ಅಶೋಕ

೫. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಜನತೆ ಸಹಕರಿಸುವಂತೆ ರಾಜ್ಯ ಮುಖ್ಯಚುನಾವಣಾಧಿಕಾರಿ ಮನವಿ

**<><*<><>*><>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಸಂಜೆ ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆಯುವ ಎರಡನೇ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ೨೦೨೬ ರ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ರಾಷ್ಟ್ರಪತಿಗಳು ಎರಡು ಪದ್ಮವಿಭೂಷಣ, ಏಳು ಪದ್ಮಭೂಷಣ ಮತ್ತು ೫೬ ಪದ್ಮಶ್ರೀ ಸೇರಿದಂತೆ ೬೫ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಪ್ರತಿಷ್ಠಿತ ಪದ್ಮಶ್ರೀ ಪ್ರಶಸ್ತಿಗೆ ರಾಜ್ಯದ ಐವರು ಸಾಧಕರು ಭಾಜನರಾಗಿದ್ದು, ವೈದ್ಯಕೀಯ ಸೇವೆಗಾಗಿ ಡಾ.ಪ್ರಭಾಕರ್ ಕೋರೆ, ಶಿಕ್ಷಣ ತಂತ್ರಜ್ಞ ಶಶಿ ಶೇಖರ್ ವೆಂಪತಿ, ಹಿಮೋಫಿಲಿಯಾ ರೋಗಿಗಳಿಗೆ ಉಚಿತ ಚಿಕಿತ್ಸೆ ಸಿಗುವಂತೆ ಮಾಡಿದ ವೈದ್ಯ ಡಾ.ಸುರೇಶ್ ಹನಗವಾಡಿ, ಉದ್ಯಮಿ ಟಿ.ಟಿ.ಜಗನ್ನಾಥನ್, ಭಾರತೀಯ ರಕ್ಷಣಾ ವಲಯವನ್ನು ಸ್ವಾವಲಂಬಿಯಾಗಿಸಿದ ವಿಜ್ಞಾನಿ ಡಾ.ಶುಭಾ ವೆಂಕಟೇಶ್ ಅಯ್ಯಂಗಾರ್ ಅವರು ಪ್ರಶಸ್ತಿ ಸ್ವೀಕರಿಸಲಿದ್ದಾರೆ.

<><*<><>*><>

ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ರಾಜಕೀಯ ಮಾಡುತ್ತಿದ್ದಾರೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಟೌನ್‌ಶಿಪ್ ವಿಚಾರ ಕುರಿತಂತೆ ಕುಮಾರಸ್ವಾಮಿಯವರು ಸರ್ಕಾರಕ್ಕೆ ಸಲಹೆ ನೀಡಲಿ ಎಂದು ತಿಳಿಸಿದ್ದಾರೆ. ಈಗಾಗಲೇ ಕುಮಾರಸ್ವಾಮಿಯವರಿಗೆ ವಿಧಾನಸೌಧಕ್ಕೆ ಚರ್ಚೆ ಆಗಮಿಸುವಂತೆ ಮುಖ್ಯಮಂತ್ರಿ ಡಿ..ಕೆ.ಶಿವಕುಮಾರ್ ಪತ್ರ ಬರೆದಿದ್ದಾರೆ. ಚರ್ಚೆಗೆ ಆಗಮಿಸಿದರೆ, ಮುಖ್ಯಮಂತ್ರಿಗಳು ಸೇರಿದಂತೆ ಸರ್ಕಾರದ ಎಲ್ಲಾ ಸಚಿವರು ಸೂಕ್ತ ಉತ್ತರ ನೀಡುವುದಾಗಿ ಎಂದು ಹೇಳಿದ್ದಾರೆ. ಇದೇ ವೇಳೆ, ರೈತರನ್ನು ಒಕ್ಕಲೆಬ್ಬಿಸುವ ಪ್ರಶ್ನೆಯೇ ಇಲ್ಲ ಎಂದು ಅವರು, ರೈತರ ಮನವೊಲಿಸುವುದಾಗಿ ತಿಳಿಸಿದ್ದಾರೆ. ಕೆಲವು ರೈತರು, ಈಗಾಗಲೇ ಜಮೀನು ನೀಡುವುದಾಗಿ ಭರವಸೆ ನೀಡಿದ್ದಾರೆ. ಆದರೆ, ಕುಮಾರಸ್ವಾಮಿಯವರು ರಾಜಕೀಯ ಮಾಡುವುದರ ಮೂಲಕ ಯೋಜನೆಗೆ ಅಡ್ಡಗಾಲು ಹಾಕುತ್ತಿದ್ದಾರೆ ಎಂದು ದೂರಿದ್ದಾರೆ.

<><*<><>*><>

ರಾಜ್ಯದ ಪ್ರವಾಸೋದ್ಯಮ ಕ್ಷೇತ್ರವನ್ನು ಮತ್ತಷ್ಟು ಅಭಿವೃದ್ಧಿಪಡಿಸುವ ಹಾಗೂ ಪ್ರವಾಸಿಗರಿಗೆ ವಿಶ್ವದರ್ಜೆಯ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ, ನೂತನವಾಗಿ 'ನಮ್ಮ ಗೈಡ್' ಆನ್‌ಲೈನ್ ವೇದಿಕೆ ಸಿದ್ಧಪಡಿಸಲು ಪ್ರವಾಸೋದ್ಯಮ ಇಲಾಖೆ ಚಿಂತನೆ ನಡೆಸಿದೆ. ವಿದೇಶಗಳಲ್ಲಿ ಪ್ರವಾಸಿಗರು ತಮಗೆ ಬೇಕಾದ ಗೈಡ್‌ಗಳನ್ನು ಆನ್‌ಲೈನ್ ಮೂಲಕವೇ ಕಾಯ್ದಿರಿಸುವ ವ್ಯವಸ್ಥೆಗಳಿವೆ. ಇದೇ ಮಾದರಿಯ ಅತ್ಯಾಧುನಿಕ ಆನ್‌ಲೈನ್ ವೇದಿಕೆಯನ್ನು ರಾಜ್ಯದಲ್ಲೂ ಪ್ರಾರಂಭಿಸುವುದು ಇಲಾಖೆಯ ಪ್ರಮುಖ ಉದ್ದೇಶವಾಗಿದೆ. ಈ ಹಿನ್ನಲೆಯಲ್ಲಿ ನೂತನ ವೆಬ್‌ಸೈಟ್ ಹಾಗೂ ಆಪ್ ರಚಿಸಲು ಇಲಾಖೆ ಮುಂದಾಗಿದೆ.  ಈ ನೂತನ ಆನ್‌ಲೈನ್ ವೇದಿಕೆಯಿಂದ, ಪ್ರವಾಸಿಗರಿಗೆ ಸ್ಥಳೀಯ ಗೈಡ್‌ಗಳನ್ನು ಸುಲಭವಾಗಿ ಸಂಪರ್ಕಿಸಲು ಮತ್ತು ಪ್ರವಾಸಿ ತಾಣಗಳನ್ನು ಸರಿಯಾಗಿ ಹಾಗೂ ಅರ್ಥಪೂರ್ಣವಾಗಿ ವೀಕ್ಷಿಸಲು ಅನುಕೂಲವಾಗಲಿದೆ.  ಈ ವಿನೂತನ ವೇದಿಕೆ ನಿರ್ಮಾಣಕ್ಕಾಗಿ ರಾಜ್ಯದ ಪ್ರತಿಭಾವಂತ ನವೋದ್ಯಮಗಳಿಗೆ ಅವಕಾಶ ನೀಡಲಾಗುವುದು ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸ್ಥಿರ ಆಡಳಿತ ನೀಡುವಲ್ಲಿ ವಿಫಲವಾಗಿದೆ ಹಾಗೂ ಆಂತರಿಕ ಕಚ್ಚಾಟದಿಂದಾಗಿ ಸಚಿವ ಸಂಪುಟ ವಿಸ್ತರಣೆಯನ್ನು ವಿಳಂಬ ಮಾಡುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ವಿಚಾರ ರೈತರ ಸಮಸ್ಯೆಯಾಗಿದ್ದು, ರೈತರೊಂದಿಗೆ ಚರ್ಚೆಯಾದರೆ ಮಾತ್ರ ಅದು ನಿಜವಾದ ಚರ್ಚೆಯಾಗಲಿದೆ ಎಂದು ಹೇಳಿದ್ದಾರೆ. ಇದೇ ವೇಳೆ, ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡಮತದಾನ ಮಾಡಿದವರನ್ನು ಕ್ಷಮಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಇದೇ ೩೦ರಿಂದ ಜುಲೈ ೧೯ರವರೆಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-ಎಸ್‌ಐಆರ್ ನಡೆಯಲಿದೆ. ಅರ್ಹ ಮತದಾರರು ಚುನಾವಣಾ ಪ್ರಕ್ರಿಯೆಯಿಂದ ವಂಚಿತರಾಗಬಾರದು ಹಾಗೂ ಯಾವುದೇ ಅನರ್ಹ ಹೆಸರುಗಳು ಮತದಾರರ ಪಟ್ಟಿಯಲ್ಲಿ ಉಳಿಯಬಾರದು ಎಂಬ ಉದ್ದೇಶದಿಂದ ಕೇಂದ್ರ ಚುನಾವಣಾ ಆಯೋಗವು ಪರಿಷ್ಕರಣೆ ನಡೆಸುತ್ತಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಪ್ರತಿಕ್ರಿಯಿಸಿರುವ ರಾಜ್ಯದ ಮುಖ್ಯಚುನಾವಣಾಧಿಕಾರಿ ಅನ್ಬುಕುಮಾರ್, ರಾಜ್ಯದ ಜನತೆ ಎಸ್‌ಐಆರ್ ಗೆ ಸಹಕರಿಸುವಂತೆ ಮನವಿ ಮಾಡಿದ್ದಾರೆ.

<><*<><>*><>

ನಿನ್ನೆ ಲಿಂಗೈಕ್ಯರಾದ ಕನಕಪುರ ದೇಗುಲ ಮಠದ ಶ್ರೀ ಮುಮ್ಮಡಿ ನಿರ್ವಾಣ ಸ್ವಾಮೀಜಿಗಳ ಪಾರ್ಥಿವ ಶರೀರಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಅಂತಿಮ ನಮನ ಸಲ್ಲಿಸಿದರು. ಈ ವೇಳೆ ಮಾತನಾಡಿದ ಅವರು, ಪ್ರತಿಬಾರಿಯೂ ತಮಗೆ ಆತ್ಮಸ್ಥೈರ್ಯ ತುಂಬುತ್ತಿದ್ದ ಸ್ವಾಮೀಜಿ ರಾಜ್ಯವನ್ನು ಆಳುವ ಯೋಗವಿದೆ ಎಂದು ಹೇಳಿದ್ದರು. ಸ್ವಾಮೀಜಿ ನಿಧನದಿಂದ ರಾಜ್ಯಕ್ಕೆ ಸಮಾಜಕ್ಕೆ ಮತ್ತು ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಸಚಿವ ಹಾಗೂ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಖಂಡ್ರೆ ಅವರು ಶ್ರದ್ಧಾಂಜಲಿ ಸಲ್ಲಿಸಿದರು.

<><*<><>*><>

ಕೇಂದ್ರ ಸರ್ಕಾರದ ವಿವಿಧ ಜನಪರ ಯೋಜನೆಗಳನ್ನು ನೇರವಾಗಿ ಸಾರ್ವಜನಿಕರಿಗೆ ತಲುಪಿಸುವ ಉದ್ದೇಶದಿಂದ ಮೈಸೂರಿನ ಸಂಸದರ ಕಚೇರಿಯಲ್ಲಿ ಇಂದು ಕೇಂದ್ರ ಸರ್ಕಾರದ ವಿವಿಧ ಜನಕಲ್ಯಾಣ ಹಾಗೂ ಪ್ರಗತಿ ಪರ ಯೋಜನೆಗಳ ಮೇಳ ಆಯೋಜಿಸಲಾಗಿತ್ತು. ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅರ್ಹ ಫಲಾನುಭವಿಗಳಿಗೆ ವೃದ್ಧಾಪ್ಯ ವೇತನ, ವಿಧವಾ ವೇತನ ಹಾಗೂ ವಿಶೇಷಚೇತರನ ವೇತನ ಸೇರಿದಂತೆ ವಿವಿಧ ಕೇಂದ್ರ ಪುರಸ್ಕೃತ ಯೋಜನೆಗಳ ಸೌಲಭ್ಯಗಳನ್ನು ವಿತರಿಸಿದರು. ಮೇಳದಲ್ಲಿ ಕೇಂದ್ರ ಸರ್ಕಾರದ ಪ್ರಮುಖ ಯೋಜನೆಗಳ ಕುರಿತು ಮಾಹಿತಿ ಪ್ರದರ್ಶನ ಏರ್ಪಡಿಸಲಾಗಿತ್ತು. ಬಳಿಕ ಮಾತನಾಡಿದ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು, ಸಮಾಜದ ಪ್ರತಿಯೊಬ್ಬರಿಗೂ ತಲುಪುವಂತಹ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದೆ. ಕ್ಷೇತ್ರದ ಜನರು ಮತ್ತು ಕೇಂದ್ರ ಸರ್ಕಾರದ ನಡುವೆ ಸೇತುವೆಯಾಗಿ ಕೆಲಸ ಮಾಡಲು ಈ ಮೇಳವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

<><*<><>*><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಸೊಳ್ಳೆಗಳಿಂದಾಗಿ ಮಲೇರಿಯಾ, ಡೆಂಘಿ ಜ್ವರ, ಚಿಕೂನ್ ಗುನ್ಯ, ಮೆದುಳು ಜ್ವರ ಹಾಗೂ ಫೈಲೇರಿಯಾದಂತಹ ಕಾಯಿಲೆಗಳು ಹರಡುವುದರಿಂದ ಜಿಲ್ಲೆಯಲ್ಲಿ ಸಾರ್ವಜನಿಕರು ಶುಚಿತ್ವ ಕಾಪಾಡುವ ಜೊತೆಗೆ ಸೊಳ್ಳೆಗಳು ಉತ್ಪತಿಯಾಗುವುದನ್ನು ತಡೆಗಟ್ಟಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನಿಂತ ನೀರಿನಲ್ಲಿ ಸೊಳ್ಳೆಗಳು ಉತ್ಪತ್ತಿಯಾಗುವುದರಿಂದ ಮನೆಯ ಸುತ್ತಮುತ್ತ ಗುಂಡಿಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಗ್ರಾಮಗಳಲ್ಲಿ ಕೆರೆಕಟ್ಟೆ, ಬಾವಿ, ಕೃಷಿ ಹೊಂಡ, ನಿಂತ ನೀರಿನ ಗುಂಡಿಗಳಿಗೆ ಲಾರ್ವಾಹಾರಿ ಮೀನುಗಳನ್ನು ಬಿಡುವುದರಿಂದ ಸೊಳ್ಳೆಗಳ ಉತ್ಪತ್ತಿ ತಪ್ಪಿಸಬಹುದು ಎಂದು ಹೇಳಿದ್ದಾರೆ. ಮನೆಗಳಲ್ಲಿ ಮಲಗುವಾಗ ತಪ್ಪದೇ ಸೊಳ್ಳೆಪರದೆಗಳನ್ನು ಉಪಯೋಗಿಸಬೇಕು. ಸಾರ್ವಜನಿಕರು ಪದೆ ಪದೆ ಚಳಿ, ಜ್ವರ, ಮೈ ಕೈ ನೋವು, ತಲೆ ನೋವು, ವಾಂತಿ, ನಿಶ್ಯಕ್ತಿ ಕಂಡುಬಂದಲ್ಲಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆದುಕೊಳ್ಳಬೇಕೆಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

<><*<><>*><>

ದೇಶದ ಸರ್ವತೋಮುಖ ಪ್ರಗತಿಯಲ್ಲಿ ಪ್ರತಿಯೊಬ್ಬ ತೆರಿಗೆದಾರರ ಪಾತ್ರವೂ ಅತ್ಯಂತ ಪ್ರಮುಖವಾಗಿದೆ ಎಂದು ಹೆಚ್ಚುವರಿ ಆದಾಯ ತೆರಿಗೆ ಅಧಿಕಾರಿ ರಾಮನಾಥನ್ ಅಭಿಪ್ರಾಯಪಟ್ಟಿದ್ದಾರೆ. ಚಿತ್ರದುರ್ಗ ಜಿಲ್ಲಾ ಪಂಚಾಯತ್ ಕಚೇರಿಯ ಸಭಾಂಗಣದಲ್ಲಿ ಇಂದು ಆದಾಯ ತೆರಿಗೆ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 'ಹೊಸ ಆದಾಯ ತೆರಿಗೆ ಕಾಯ್ದೆ-೨೦೨೫' ಕುರಿತ ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ಸುಲಭ ತೆರಿಗೆ ವ್ಯವಸ್ಥೆಯನ್ನು ಜಾರಿಗೆ ತರುವ ಮೂಲಕ ತೆರಿಗೆ ಸುಧಾರಣೆಗೆ ಮಹತ್ವದ ಹೆಜ್ಜೆಯನ್ನಿಟ್ಟಿದೆ ಎಂದು ತಿಳಿಸಿದ್ದಾರೆ. ಜಾಗತಿಕ ಮಟ್ಟದಲ್ಲಿ ಭಾರತದ ಆರ್ಥಿಕತೆಯನ್ನು ಬಲಪಡಿಸಲು ಮತ್ತು ೨೦೪೭ರ ವೇಳೆಗೆ ಅಮೃತ ಕಾಲದ ಗುರಿಯನ್ನು ತಲುಪಲು ಈ ತೆರಿಗೆ ವ್ಯವಸ್ಥೆಯು ಸಹಕಾರಿಯಾಗಲಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ರಾಯಚೂರಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಮುಂದಿನ ದಿನಗಳಲ್ಲಿ ಸಾಕಷ್ಟು ಉಲ್ಬಣಗೊಳ್ಳುವ ಹಿನ್ನೆಲೆಯಲ್ಲಿ ಗಣೇಕಲ್ ಜಲಾಶಯದಿಂದ ರಾಂಪೂರ ಕೆರೆಗೆ ನೀರು ತುಂಬಿಸುವ ಕೆಲಸ ತ್ವರಿತ ಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಶಾಸಕ ಶಿವರಾಜ ಪಾಟೀಲ್ ತಿಳಿಸಿದ್ದಾರೆ. ಮಳೆ ಆಗದೇ ಇರುವ ಹಿನ್ನೆಲೆಯಲ್ಲಿ ರೈತರು ಬಿತ್ತನೆ ಮಾಡಿದ್ದು ಕಾಲುವೆಗೆ ನೀರು ಬಿಟ್ಟಾಗ ಬೆಳೆಗೆ ಹರಿಸಿಕೊಳ್ಳುವ ಸಾಧ್ಯತೆ ಇದೆ, ಈ ಹಿನ್ನೆಲೆಯಲ್ಲಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಜೊತೆಗೆ ಸಭೆ ನಡೆಸಿ ಜಲಾಶಯದಿಂದ ರಾಂಪೂರ ವರೆಗೆ ಪಾಲಿಕೆ ಸಿಬ್ಬಂದಿ, ಪೋಲಿಸ್ ಬಂದೋಬಸ್ತ್ ಮೂಲಕ ಕೆರೆ ತುಂಬಿಸಿ ಎಂದು ಪಾಲಿಕೆ ಆಯುಕ್ತರಿಗೆ ಸೂಚನೆ ನೀಡಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>